ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2017–18** **ದಿನಾಂಕ: 03–08–2017**

**ಪತ್ರಿಕಾ ಪ್ರಕಟಣೆ**

**ಸಂ. 1/1**

## ಕಾನೂನು ಬಾಹಿರವಾಗಿ ವಸತಿ ಶಾಲೆ ನಡೆಸುವವರ ಮೇಲೆ ಕ್ರಮ ಕೈಗೊಳ್ಳಲು ಕಾನೂನಿನ ಅಗತ್ಯ ಇದೆ – ವಿ.ಎಸ್. ಉಗ್ರಪ್ಪ

ಬೆಂಗಳೂರು, ಆಗಸ್ಟ್ 3 (ಕರ್ನಾಟಕ ವಾರ್ತೆ)

ಕಾನೂನು ಬಾಹಿರವಾಗಿ ವಸತಿ ಶಾಲೆಗಳನ್ನು ನಡೆಸುವವರ ಮೇಲೆ ನಿಯಂತ್ರಣ ಹೇರಲು ಕಠಿಣ ಕಾನೂನು ಜಾರಿಗೆ ತರುವ ಅಗತ್ಯ ಇದೆ ಎಂದು ಮಹಿಳೆ ಮತ್ತು ಮಕ್ಕಳ ಮೇಲಿನ ಶೋಷಣೆ, ಕೌರ್ಜನಿಕ, ಅತ್ಯಾಚಾರ ನಿಯಂತ್ರಿಸುವ ಮತ್ತು ವರದಿ ನೀಡುವ ಸಮಿತಿಯ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ತಿನ ಸದಸ್ಯರೂ ಆದ ವಿ.ಎಸ್. ಉಗ್ರಪ್ಪ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಇತ್ತೀಚೆಗೆ ದಕ್ಷಿಣ ಕನ್ನಡ ಜಿಲ್ಲೆಯ ಶಿಕ್ಷಣ ಸಂಸ್ಥೆಯಲ್ಲಿ ವ್ಯಾಸಂಗ ಮಾಡುತ್ತಿದ್ದ ಕಾವ್ಯ ಪೂಜಾರಿ ಅಸಹಜವಾಗಿ ಸಾವನ್ನಪ್ಪಿದ್ದು ಮೃತ ಕಾವ್ಯಳ ಸಂಬಂಧಿಕರಿಗೆ ಪರಿಹಾರ ದೊರಕಿಸಿಕೊಡುವಂತೆ ಜಿಲ್ಲಾಡಳಿತಕ್ಕೆ ಸೂಚಿಸಲಾಗಿದೆ ಎಂದರು.

ವಸತಿ ಶಾಲೆ ಮತ್ತು ಹಾಸ್ಟೆಲ್ ನಡೆಸಲು ಶಿಕ್ಷಣ ಸಂಸ್ಥೆ ಅನುಮತಿಯನ್ನೇ ಪಡೆದಿಲ್ಲ ಎಂಬುದು ನಾನು ಸ್ಥಳಕ್ಕೆ ಭೇಟಿನೀಡಿ ಪರಿಶೀಲನೆ ನಡೆಸಿದಾಗಲೆ ತಿಳಿಯಿತು ಎಂದು ಮಾತನಾಡಿದ ಉಗ್ರಪ್ಪ ಅವರು ಹಾಸ್ಟೆಲ್‌ಗಳಲ್ಲಿ ಹಾಗೂ ವಸತಿ ಶಾಲೆಗಳಲ್ಲಿ ಅಸಹಜವಾಗಿ ವಿದ್ಯಾರ್ಥಿಗಳು ಸಾವನ್ನಪ್ಪಿದರೇ ಅಂತಹ ಶಿಕ್ಷಣ ಸಂಸ್ಥೆಗಳನ್ನೇ ಹೊಣೆಗಾರರನ್ನಾಗಿ ಮಾಡಬೇಕಾಗಿದೆ ಎಂದು ಮಾತನಾಡಿದರು.

ಕಾವ್ಯ ವಾಸವಿದ್ದ ಹಾಸ್ಟೆಲ್ ಕಟ್ಟಡಕ್ಕೆ ಲಿಫ್ಟಿನ ವ್ಯವಸ್ಥೆ ಇಲ್ಲದಿರುವುದು ಹಾಗೂ ಕೊಠಡಿಗಳು ಶುಚಿತ್ವವಾಗಿಲ್ಲದಿರುವುದನ್ನು ಭೇಟಿ ಸಂದರ್ಭದಲ್ಲಿ ಗಮನಿಸಲಾಯಿತು ಎಂದು ತಿಳಿಸಿದ ಅವರು ವಸತಿ ಶಾಲೆಗಳಲ್ಲಿ ಕನಿಷ್ಠ ಮೂಲಭೂತ ಸೌಲಭ್ಯಗಳಿರುವುದು ಅಗತ್ಯ, ಅಲ್ಲದೆ ವಸತಿ ಶಾಲೆಗಳಲ್ಲಿನ ನ್ಯೂನ್ಯತೆಗಳನ್ನು ಸರಿಪಡಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು ಎಂದು ವಿ.ಎಸ್. ಉಗ್ರಪ್ಪ ಅವರು ತಿಳಿಸಿದರು.

ಎಸ್‌ಎಂ:ಜೆಡಿ:ಜಿಪಿಆರ್.

# ಡಿಸೆಂಬರ್ ಅಂತ್ಯಕ್ಕೆ ಮತ್ತೆ 5172 ಹೊಸ ಬಸ್ಸುಗಳು ಸಂಚಾರ ಆರಂಭಿಸಲಿವೆ

– ರಾಮಲಿಂಗರೆಡ್ಡಿ

ಬೆಂಗಳೂರು, ಆಗಸ್ಟ್ 3 (ಕರ್ನಾಟಕ ವಾರ್ತೆ)

ಪ್ರಯಾಣಿಕರಿಗೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ ಸಾರಿಗೆ ಇಲಾಖೆ ಪ್ರಸಕ್ತ ಸಾಲಿನಲ್ಲಿ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳಿಗೆ ಹಾಗೂ ನಗರ ಸಾರಿಗೆ ಸಂಸ್ಥೆಗೆ 5172 ಹೊಸ ಬಸ್ಸುಗಳನ್ನು ಖರೀದಿಸಲಿದ್ದು ಡಿಸೆಂಬರ್ ಅಂತ್ಯದೊಳಗೆ ಹೊಸ ಬಸ್ಸುಗಳು ಸಂಚಾರ ಆರಂಭಿಸಲಿವೆ ಎಂದು ಸಾರಿಗೆ ಸಚಿವ ಆರ್. ರಾಮಲಿಂಗಾರೆಡ್ಡಿ ಅವರು ತಿಳಿಸಿದರು.

ವಿಕಾಸಸೌಧದ ತಮ್ಮ ಕಚೇರಿಯಲ್ಲಿ ಇಂದು ಭೇಟಿಮಾಡಿದ ಪತ್ರಕರ್ತರೊಂದಿಗೆ ಮಾತನಾಡಿದ ಸಚಿವರು ನಗರದಲ್ಲಿ ಮೆಟ್ರೋ ರೈಲು ಸಂಚಾರ ವಿಸ್ತರಣೆಯಿಂದಾಗಿ ನಗರ ಸಾರಿಗೆ ಬಸ್‌ಗಳಲ್ಲಿ ಪ್ರಯಾಣಿಸುತ್ತಿದ್ದ ಜನರ ಸಂಖ್ಯೆ ಗಣನೀಯವಾಗಿ ಕಡಿಮೆಯಾಗಿದೆ ಎಂದರು.

ಈ ಹಿಂದೆ ನರ್ಮ್ ಯೋಜನೆಯಡಿ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಹೆಚ್ಚು ಅನುದಾನ ಬರುತ್ತಿತ್ತು. ಈಗ ಕಡಿತಗೊಳಿಸಲಾಗಿದೆ ಎಂದ ಸಚಿವರು ಈ ಸಂಬಂಧ ನಾನು ಸೇರಿದಂತೆ ಸಾರಿಗೆ ಇಲಾಖೆಯ ಹಿರಿಯ ಅಧಿಕಾರಿಗಳು ಕೇಂದ್ರ ಸಚಿವ ವೆಂಕಯ್ಯ ನಾಯ್ಡು ಅವರನ್ನು ಭೇಟಿಮಾಡಿ ಅನುದಾನ ನಿಲ್ಲಿಸದಂತೆ ಮನವಿ ಮಾಡಲಾಗಿದೆ ಎಂದರು.

ನಮ್ಮ ಯೋಜನೆಯಡಿ ರಾಜ್ಯದಲ್ಲಿನ 36 ನಗರಗಳಲ್ಲಿ ನಗರ ಸಾರಿಗೆ ಬಸ್ ಸಂಚಾರ ಸೇವೆ ಆರಂಭಿಸಲಾಗಿದ್ದು ಸುಮಾರು 76 ಹೊಸ ಬಸ್ ನಿಲ್ದಾಣಗಳನ್ನು ನಿರ್ಮಾಣ ಮಾಡಲಾಗಿದೆ ಎಂದು ಮಾತನಾಡಿದ ಸಾರಿಗೆ ಸಚಿವರು ಸುಮಾರು 52 ಲಕ್ಷ ಜನರು ಇಂದಿಗೂ ನಗರ ಸಾರಿಗೆ ಬಸ್ಸುಗಳಲ್ಲಿ ಪ್ರಯಾಣಿಸುತ್ತಿದ್ದು 1.15 ಕೋಟಿ ಪ್ರಯಾಣಿಕರು ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ಸುಗಳಲ್ಲಿ ಪ್ರತಿದಿನ ಪ್ರಯಾಣ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಅಂತರ್‌ನಿಗಮ ವರ್ಗಾವಣೆ ವಿಚಾರಕ್ಕೆ ಸಂಬಂಧಿಸಿದಂತೆ ಸಾರಿಗೆ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸುಮಾರು 700 ಸಿಬ್ಬಂದಿಗಳು ಇನ್ನು ಸಮರ್ಪಕ ದಾಖಲೆಗಳನ್ನು ಒದಗಿಸಿಲ್ಲ ಎಂದು ತಿಳಿಸಿದ ಸಾರಿಗೆ ಸಚಿವರು ಹೀಗಾಗಿ ಅಂತವರಿಗೆ ಮತ್ತೊಂದು ಅವಕಾಶ ನೀಡಿ ಸಮರ್ಪಕ ದಾಖಲೆ ನೀಡುವಂತೆ ಸೂಚಿಸಲಾಗಿದೆ ಎಂದರು.

ರಾಜ್ಯದಲ್ಲಿ ಸಾರಿಗೆ ಸಂಸ್ಥೆ ಉತ್ತಮವಾಗಿ ಕರ್ತವ್ಯ ನಿರ್ವಹಿಸುತ್ತಿದ್ದು ಹಲವಾರು ಪ್ರಶಸ್ತಿಗಳು ಗೌರವಗಳು ಲಭಿಸಿದ್ದು, ಕಳೆದ ವಾರ ಕೂಡ ಸಂಸ್ಥೆಗೆ ಐದು ಪ್ರಶಸ್ತಿಗಳು ಲಭಿಸಿವೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ತಿಳಿಸಿದರು.

ಎಸ್‌ಎಂ:ಜೆಡಿ:ಜಿಪಿಆರ್.

**ಸಂ. 3/3**

## ವಿವಿಧ ಸ್ನಾತಕೋತ್ತರ ಕೋರ್ಸುಗಳ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 3 (ಕರ್ನಾಟಕ ವಾರ್ತೆ)

ಗದಗನಲ್ಲಿ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದಲ್ಲಿ 2017–18 ನೇ ಸಾಲಿನಲ್ಲಿ ಪ್ರಾರಂಭಿಸುವ ವಿವಿಧ ಸ್ನಾತಕೋತ್ತರ ಕೋರ್ಸುಗಳ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಎಂ.ಬಿ.ಎ. – ಗ್ರಾಮೀಣ ನಿರ್ವಹಣೆ, ಎಂ.ಎ. – ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಎಂ.ಎಸ್ಸಿ – ಜಿಯೋಇನ್ಫರ್‌ಮೆಟಿಕ್ಸ್, ಎಂ.ಎಸ್. ಡಬ್ಲ್ಯೂ – ಗ್ರಾಮೀಣ ಪುನರ್‌ನಿರ್ಮಾಣ – ಎಂ.ಎಂ.ಎಸ್ (ಮಾಸ್ಟರ್ ಆಫ್ ಮ್ಯಾನೇಜಮೆಂಟ್ ಸ್ಟಡೀಸ್) ಕೌಶಲ್ಯ ಮತ್ತು ಉದ್ಯಮಶೀಲತೆ ಅಭಿವೃದ್ಧಿ.

ಅರ್ಜಿ ಸಲ್ಲಿಸುವ ವಿಧಾನ ಮತ್ತು ಶುಲ್ಕಕ್ಕೆ ಸಂಬಂಧಿಸಿದ ಹೆಚ್ಚಿನ ವಿವರಗಳ ಮಾಹಿತಿಯನ್ನು www.ksrdpru.in ವೆಬ್‌ಸೈಟ್‌ನಲ್ಲಿ ಪಡೆಯಬಹುದಗಿದೆ. ಅರ್ಹ ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿಯನ್ನು ಡೌನ್‌ಲೋಟ್ ಮಾಡಿಕೊಂಡು ರೂ 200/– (ಎಸ್.ಸಿ/ಎಸ್.ಟಿ. ಮತ್ತು ಪ್ರವರ್ಗ –1 ಅಭ್ಯರ್ಥಿಗಳು ರೂ 100/–) ಶುಲ್ಕದೊಂದಿಗೆ ಆಗಸ್ಟ್ 5 ರೊಳಗೆ ಮತ್ತು ದಂಡ ಶುಲ್ಕ ರೂ 200/– ದೊಂದಿಗೆ ಆಗಸ್ಟ್ 7 ಸಂಜೆ 5.00 ಗಂಟೆಯೊಳಗೆ ಭರ್ತಿಮಾಡಿದ ಅರ್ಜಿಯನ್ನು ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಜನರಲ್ ಕಾರಿಯಪ್ಪ ಸರ್ಕಲ್, ಗದಗ– 582 101 ಇವರಿಗೆ ಖುದ್ದಾಗಿ ಅಥವಾ ಸ್ಪೀಡ್ ಪೋಸ್ಟ್ ಮುಖಾಂತರ ನಿಗದಿತ ಅವಧಿಯೊಳಗೆ ಸಲ್ಲಿಸಬೇಕು.

ದಂಡ ಶುಲ್ಕವಿಲ್ಲದೆ ಭರ್ತಿಮಾಡಿದ ಅರ್ಜಿಗಳನ್ನು ಸಲ್ಲಿಸುವ ಕೊನೆಯ ದಿನ ಆಗಸ್ಟ್ 5, ರೂ 200/– ದಂಡ ಶುಲ್ಕದೊಂದಿಗೆ ಅರ್ಜಿ ಸಲ್ಲಿಸಲು ಕೊನೆಯ ದಿನ ಆಗಸ್ಟ್ 7, ಜೇಷ್ಠತಾ ಪಟ್ಟಿ ಪ್ರಕಟಿಸುವ ದಿನ ಆಗಸ್ಟ್ 8, ಜೇಷ್ಠತಾ ಪಟ್ಟಿಯಲ್ಲಿನ ದೋಷಗಳ ಬಗ್ಗೆ ಅರ್ಜಿ ಸಲ್ಲಿಸಲು ಕೊನೆಯ ದಿನ ಆಗಸ್ಟ್ 9,

ಅಂತಿಮ ಜೇಷ್ಠತಾ ಪಟ್ಟಿ ಪ್ರಕಟಿಸುವ ದಿನ ಆಗಸ್ಟ್ 9, ಸ್ನಾತಕೋತ್ತರ ಪದವಿಗಳಿಗೆ ಪ್ರವೇಶ ಪ್ರಕ್ರಿಯೆ ದಿನ ಆಗಸ್ಟ್ 10 ಮತ್ತು 11 ಹಾಗೂ ಪ್ರಥಮ ಸೆಮಿಸ್ಟರ್ ತರಗತಿಗಳು ಪ್ರಾರಂಭವಾಗುವ ದಿನ ಆಗಸ್ಟ್ 16.

ಎಂಬಿಎ – ಗ್ರಾಮೀಣ ನಿರ್ವಹಣೆ ಕೋರ್ಸಿಗೆ ಕೆಇಎ ಯಿಂದ ಬಂದ ಅಭ್ಯರ್ಥಿಗಳನ್ನು ತುಂಬಲಾಗುವುದು. ಖಾಲಿ ಉಳಿದ ಸೀಟುಗಳನ್ನು ವಿಶ್ವವಿದ್ಯಾಲಯದ ಪ್ರವೇಶ ಪರೀಕ್ಷೆಯ ಮೂಲಕ ತುಂಬಿಕೊಳ್ಳಲಾಗುವುದು.

**ಸಂ. 4/4**

## <u>ತಾತ್ಕಾಲಿಕವಾಗಿ ನೇಮಕ ಮಾಡಲು</u>
## <u>ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ</u>

ಬೆಂಗಳೂರು, ಆಗಸ್ಟ್ 3 (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ಗದಗ, 2017–18 ನೇ ಸಾಲಿನಿಂದ ಪ್ರಾರಂಭಿಸುವ ಈ ಕಳೆಕಂಡ ಸ್ನಾತಕೋತ್ತರ ಕೋರ್ಸುಗಳನ್ನು ಬೋಧಿಸಲು ಪೂರ್ಣಕಾಲಿಕ/ಅರೆಕಾಲಿಕ ಉಪನ್ಯಾಸಕರನ್ನು ತಾತ್ಕಾಲಿಕವಾಗಿ ನೇಮಕ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಸ್ನಾತಕೋತ್ತರ ವಿಷಯದಲ್ಲಿ ಶೇ 55 ಅಂಕಗಳನ್ನು ಪಡೆದಿರಬೇಕು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ದೈಹಿಕವಾಗಿ ಮತ್ತು ದೃಷ್ಟಿವಿಭಿನ್ನರಿಗೆ ಶೇ 50 ಅಂಕಗಳು, ಪಿಹೆಚ್‌ಡಿ/ಎನ್‌ಇಟಿ/ಎಸ್‌ಎಲ್‌ಇಟಿ ವಿದ್ಯಾರ್ಹತೆ ಹೊಂದಿದ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದರೆ ಇತರೆ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು.

ಬೇರೆ ವಿಶ್ವವಿದ್ಯಾಲಯಗಳಲ್ಲಿ/ಸಂಸ್ಥೆಗಳಲ್ಲಿ ಕರ್ಯನಿರ್ವಹಿಸುತ್ತಿರುವ ಹಿರಿಯ ಅಧ್ಯಾಪಕರು ನಿಯೋಜನೆ ಮೇಲೆ ಬರಲು ಸಹ ಅರ್ಜಿ ಸಲ್ಲಿಸಬಹುದು. ಗೌರವ/ಎಮಿರಿಟಸ್ ಪ್ರೊಫೆಸರ್/ಸಂದರ್ಶಕ ಶಿಕ್ಷಕರಾಗಿ ಕಾರ್ಯನಿರ್ವಹಿಸಲು ಇಚ್ಛಿಸುವವರು ಸಹ ಅರ್ಜಿ ಸಲ್ಲಿಸಬಹುದು.

ಸ್ನಾತಕೋತ್ತರ ಪದವಿಯಲ್ಲಿ ಶೇ 55 ಅಂಕ ಪಡೆದಿರುವವರು ಸಂಶೋಧನಾ/ಪ್ರಾಜೆಕಟ್ಟ ಫೆಲೋ ಆಗಲು ಅರ್ಜಿ ಸಲ್ಲಿಸಬಹುದು ಅರ್ಹ ಅಭ್ಯರ್ಥಿಗಳು ಸ್ವ–ವಿವರ ಮತ್ತು ಅಗತ್ಯ ದಾಖಲೆಗಳೊಂದಿಗೆ ಅರ್ಜಿಗಳನ್ನು ಕುಲಸಚಿವರು, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ, ರೈತಭವನ, ಗದಗ – 582 101, ಇವರಿಗೆ ಆಗಸ್ಟ್ 7 ರೊಳಗೆ ತಲುಪುವಂತೆ ಕಳುಹಿಸಬೇಕು. ಸಂಭಾವನೆಯನ್ನು ವಿಶ್ವವಿದ್ಯಾಲಯದ ನಿಯಮಗಳನುಸಾರ ಪಾವತಿಸಲಾಗುವುದು.

ಎಂ.ಬಿ.ಎ. – ಗ್ರಾಮೀಣ ನಿರ್ವಹಣೆ, ಎಂ.ಎ. – ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಎಂ.ಎಸ್ಸಿ – ಜಿಯೋಇನ್ಫರ್‌ಮೆಟಿಕ್ಸ್ – ಎಂ.ಎಸ್. ಡಬ್ಲ್ಯೂ – ಗ್ರಾಮೀಣ ಪುನರ್‌ನಿರ್ಮಾಣ – ಎಂ.ಎಂ.ಎಸ್ (ಮಾಸ್ಟರ್ ಆಫ್ ಮ್ಯಾನೇಜ್‌ಮೆಂಟ್ ಸ್ಟಡೀಸ್) ಕೌಶಲ್ಯ ಮತ್ತು ಉದ್ಯಮಶೀಲತೆ ಅಭಿವೃದ್ಧಿ ಈ ಕೋರ್ಸುಗಳಿಗೆ ಬೋಧಕ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆ.

ಅರ್ಹ ಅಭ್ಯರ್ಥಿಗಳಿಗೆ ದಿನಾಂಕ 10–08–2017 ಮತ್ತು 11–08–2017 ರಂದು ಶುಕ್ರವಾರ ಬೆಳಿಗ್ಗೆ 11–00 ಗಂಟೆಗೆ, ವಿಶ್ವವಿದ್ಯಾಲಯದ ಕಚೇರಿ, ಗದಗದಲ್ಲಿ ಸಂದರ್ಶನ ನಡೆಸಲಾಗುವುದು. ಬೋಧನೆಗೆ ಅವಶ್ಯವಿರುವಷ್ಟು ಜನರನ್ನು ಮಾತ್ರ ನೇಮಕ ಮಾಡುವ ಅಧಿಕಾರ ವಿಶ್ವವಿದ್ಯಾಲಯಕ್ಕಿರುತ್ತದೆ. ಸಂದರ್ಶನಕ್ಕೆ ಹಾಜರಾಗುವವರಗೆ ಯಾವುದೇ ಭತ್ಯೆಯನ್ನು ನೀಡಲಾಗುವುದಿಲ್ಲ.

ವಿದ್ಯಾರ್ಹತೆಯ ವಿವರಗಳಿಗೆ ಮತ್ತು ಸಂದರ್ಶನದ ದಿನಾಂಕದಲ್ಲಿ ಬದಲಾವಣೆಗಳಿಗೆ ವಿಶ್ವವಿದ್ಯಾಲಯದ ಅಂತರ್ಜಾಲವನ್ನು www.ksrdpru.in ನೋಡಬಹುದು.

ಎಸ್‌ಎಂ:ಜೆಡಿ:ಜಿಪಿಆರ್.

**ಸಂ. 5/5**

# ‘ಕಲೆ ಮತ್ತು ಸಹೃದಯತೆ’ ಕಲಾಶಿಬಿರ

ಬೆಂಗಳೂರು, ಆಗಸ್ಟ್ 3 (ಕರ್ನಾಟಕ ವಾರ್ತೆ)

ಕರ್ನಾಟಕ ಲಲಿತಕಲಾ ಅಕಾಡೆಮಿ ವತಿಯಿಂದ ಆಗಸ್ಟ್ 5 ರಿಂದ 7 ರವರಗೆ “ಕಲೆ ಮತ್ತು ಸಹೃದಯತೆ (Art with Heart) ಕಲಾಶಿಬಿರ” ವನ್ನು ಚಿನ್ನಯ್ಯ ಆಡಿಟೋರಿಯಂ, ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರಿನಲ್ಲಿ ಏರ್ಪಡಿಸಿದೆ.

ಈ ಶಿಬಿರದ ಉದ್ಘಾಟನೆಯು ಆಗಸ್ಟ್ 5 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರಿನಲ್ಲಿ ಏರ್ಪಡಿಸಲಾಗಿದೆ.

ಡಾ. ಸಿ.ಎನ್. ಮಂಜುನಾಥ, ನಿರ್ದೇಶಕರು, ಶ್ರೀ ಜಯದೇವ ಹೃದ್ರೋಗ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಇವರು ಶಿಬಿರದ ಉದ್ಘಾಟನೆಯನ್ನು ನೆರವೇರಿಸಲಿದ್ದಾರೆ.

ಸಾಹಿತಿಗಳು ಮತ್ತು ಶಿಕ್ಷಣ ತಜ್ಞ ಪ್ರೊ. ಕೆ.ಇ. ರಾಧಾಕೃಷ್ಣ ಅವರು ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಶಿಭಿರದ ಅಧ್ಯಕ್ಷತೆಯನ್ನು ಡಾ. ಎಂ.ಎಸ್. ಮೂರ್ತಿ, ಅಧ್ಯಕ್ಷರು, ಕರ್ನಾಟಕ ಲಲಿತಕಲಾ ಅಕಾಡೆಮಿ ಅವರು ವಹಿಸಲಿದ್ದಾರೆ.

ಆಗಸ್ಟ್ 7 ರಂದು ನಡೆಯಲಿರುವ ಸಮಾರೋಪ ಸಮಾರಂಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕ ಎನ್. ಆರ್. ವಿಶುಕುಮಾರ್ ಅವರು ಸಮಾರೋಪ ನುಡಿಯನ್ನು ನೆರವೇರಿಸಲಿದ್ದಾರೆ. ಸಮಾರೋಪದ ಅಧ್ಯಕ್ಷತೆಯನ್ನು ಡಾ. ಎಂ.ಎಸ್. ಮೂರ್ತಿ, ಅಧ್ಯಕ್ಷರು, ಕರ್ನಾಟಕ ಲಲಿತಕಲಾ ಅಕಾಡೆಮಿ ಅವರು ವಹಿಸಲಿದ್ದಾರೆ

ಎಸ್‌ಎಂ:ಜೆಡಿ:ಜಿಪಿಆರ್.

**ಸಂ. 6/6**

## ಒಂದು ವರ್ಷದ ಶಿಶಿಕ್ಷು ತರಬೇತಿಗಾಗಿ ಸಂದರ್ಶನ

ಬೆಂಗಳೂರು, ಆಗಸ್ಟ್ 3 (ಕರ್ನಾಟಕ ವಾರ್ತೆ)

ಬಿ.ಇ. ಮತ್ತು ಡಿಪ್ಲೊಮೊದಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳಿಗೆ ವಿವಿಧ ಉದ್ದಿಮೆಗಳಲ್ಲಿ ಒಂದು ವರ್ಷದ ಶಿಶಿಕ್ಷು ತರಬೇತಿಗಾಗಿ ಆಗಸ್ಟ್ 11 ರಂದು ಬೆಳಿಗ್ಗೆ 10.00 ಸಂಜೆ 5.30 ಗಂಟೆವರೆಗೆ ನಗರದ ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಕೆಮಿಕಲ್ ಬ್ಲಾಕ್, ಶೇಷಾದ್ರಿ ರಸ್ತೆ, ಬೆಂಗಳೂರು ಇಲ್ಲಿ ಸಂದರ್ಶನವನ್ನು ನಡೆಸಲಾಗುವುದು.

ಈ ಸಂದರ್ಶನದಲ್ಲಿ ಸರ್ಕಾರಿ, ಅರೆ ಸರ್ಕಾರಿ ಮತ್ತು ಖಾಸಗಿ ಉದ್ದಿಮೆಗಳು ಭಾಗವಹಿಸಲಿದ್ದು, ವಿದ್ಯಾರ್ಥಿಗಳು ಇದರ ಉಪಯೋಗವನ್ನು ಪಡೆದುಕೊಳ್ಳಬಹುದಾಗಿದೆ. ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳಿಗೆ ಸ್ಥಳದಲ್ಲಿಯೇ ನೋಂದಣಿ ಮಾಡಿಕೊಳ್ಳಲಾಗುವುದು.

ಎಸ್‌ಎಂ:ಜೆಡಿ:ಜಿಪಿಆರ್.

**ಸಂ. 7/7**

## ಕರ್ನಾಟಕ ಸಮಾಜ ಕಲ್ಯಾಣ ಮಂಡಳಿಗೆ ಟಿ.ಇ. ವೆಂಕಟಲಕ್ಷ್ಮೀ ಅಧ್ಯಕ್ಷೆ

ಬೆಂಗಳೂರು, ಆಗಸ್ಟ್ 3 (ಕರ್ನಾಟಕ ವಾರ್ತೆ)

ಭಾರತ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯದ ಅಡಿಯಲ್ಲಿ ಬರುವ ಕೇಂದ್ರ ಸಮಾಜ ಕಲ್ಯಾಣ ಮಂಡಳಿ, ನವದೆಹಲಿ ಇದರ ಅಂಗ ಸಂಸ್ಥೆಯಾದ ಕರ್ನಾಟಕ ರಾಜ್ಯ ಸಮಾಜ

ಕಲ್ಯಾಣ ಮಂಡಳಿಯು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಕಾರ್ಯಕ್ರಮಗಳನ್ನು ರಾಜ್ಯಾದ್ಯಂತ ನಡೆಸುತ್ತಿರುವ ಸಮಾಜಿಕ ಸಂಘ ಸಂಸ್ಥೆಗಳಿಗೆ ಆರ್ಥಿಕ ಸಹಾಯವನ್ನು ಮತ್ತು ಮಾರ್ಗದರ್ಶನವನ್ನು ನೀಡುತ್ತಿರುತ್ತದೆ.

ಈ ಮಂಡಳಿಯ ನೂತನ ಅಧ್ಯಕ್ಷರಾಗಿ ಶ್ರೀಮತಿ ಟಿ.ಇ. ವೆಂಕಟಲಕ್ಷ್ಮೀ ಬಸವಲಿಂಗರಾಜು, ಬೆಂಗಳೂರು ಇವರು ನೇಮಕಗೊಂಡಿರುತ್ತಾರೆ. ಇವರು ಜುಲೈ 27 ರಂದು ಮಂಡಳಿಯ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದರು.

ಎಸ್‌ಎಂ:ಜೆಡಿ:ಜಿಪಿಆರ್.